# ತ್ಯಾಜ್ಯ ತೆರವುಗೊಳಿಸದಿದ್ದರೆ ಸರ್ಕಾರಿ ಇಲಾಖೆಗಳಿಗೆ ನೋಟೀಸ್: ಕೃಷ್ಣ ಭೈರೇಗೌಡ ಸೂಚನೆ

## ಸಿ&ಡಿ ತ್ಯಾಜ್ಯ ಸುರಿಯುತ್ತಿದ್ದ 3,022 ಸ್ಥಳಗಳ ಗುರುತು, ಸುಮಾರು 59,823 ಟನ್ ತ್ಯಾಜ್ಯ ಇರುವ ಅಂದಾಜು



**ಬೆಂಗಳೂರು:** ರಾಜಧಾನಿಯಲ್ಲಿ 'ತ್ಯಾಜ್ಯ ಮುಕ್ತ ಅಭಿಯಾನ'ಕ್ಕೆ ಮತ್ತಷ್ಟು ವೇಗ ನೀಡುವ ಉದ್ದೇಶದಿಂದ ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಅಧಿಕಾರಿಗಳಿಗೆ ಹಲವು ಮಹತ್ವದ ಸೂಚನೆಗಳನ್ನು ನೀಡಿದ್ದಾರೆ. ನಗರದ ವಿವಿಧ ಭಾಗಗಳಲ್ಲಿ ಸ್ವಚ್ಛತೆ ಹಾಗೂ ತ್ಯಾಜ್ಯ ತೆರವು ಕಾರ್ಯಗಳನ್ನು ಸಮರ್ಪಕವಾಗಿ ಕೈಗೊಳ್ಳದ ಸರ್ಕಾರಿ ಇಲಾಖೆಗಳ ವಿರುದ್ಧ ನೋಟಿಸ್ ಜಾರಿ ಮಾಡುವಂತೆ ಐದು ನಗರ ಪಾಲಿಕೆಗಳ ಆಯುಕ್ತರಿಗೆ ನಿರ್ದೇಶನ ನೀಡಿದ್ದಾರೆ.

ಅಭಿಯಾನದ ಪ್ರಗತಿ ಕುರಿತು ನಡೆದ ವರ್ಚುವಲ್ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಸಚಿವರು, ನಗರದ ಎಲ್ಲಾ ಸರ್ಕಾರಿ ಕಚೇರಿಗಳು ತಮ್ಮ ಕಚೇರಿ ಆವರಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸಂಗ್ರಹವಾಗಿರುವ ತ್ಯಾಜ್ಯವನ್ನು ಕಡ್ಡಾಯವಾಗಿ ತೆರವುಗೊಳಿಸಬೇಕು. ಸಾರ್ವಜನಿಕ ಸ್ಥಳಗಳಲ್ಲಿ ತ್ಯಾಜ್ಯ ಸಂಗ್ರಹವಾಗದಂತೆ ಸಂಬಂಧಪಟ್ಟ ಇಲಾಖೆಗಳು ನಿರಂತರವಾಗಿ ಮೇಲ್ವಿಚಾರಣೆ ನಡೆಸಬೇಕು ಎಂದು ಸೂಚಿಸಿದರು.

ನಗರದಲ್ಲಿ ಆರಂಭಿಸಲಾಗಿರುವ ತ್ಯಾಜ್ಯ ಮುಕ್ತ ಅಭಿಯಾನಕ್ಕೆ ಉತ್ತಮ ಪ್ರತಿಕ್ರಿಯೆ ದೊರೆಯುತ್ತಿದ್ದು, ದಿನದಿಂದ ದಿನಕ್ಕೆ ಕಾರ್ಯಾಚರಣೆಯ ವೇಗ ಹೆಚ್ಚುತ್ತಿದೆ. ಆಗಸ್ಟ್ 1ರಿಂದ 6ರವರೆಗೆ ನಗರದ 453 ಸಾರ್ವಜನಿಕ ಸ್ಥಳಗಳಿಂದ ಒಟ್ಟು 10,056 ಟನ್ ನಿರ್ಮಾಣ ಮತ್ತು ಕೆಡವುವಿಕೆ ತ್ಯಾಜ್ಯವನ್ನು ತೆರವುಗೊಳಿಸಲಾಗಿದೆ ಎಂದು ಸಚಿವರು ಸಭೆಯಲ್ಲಿ ಮಾಹಿತಿ ನೀಡಿದರು.

ಅಭಿಯಾನದಡಿ ವಿವಿಧ ಸರ್ಕಾರಿ ಇಲಾಖೆಗಳು ಕೈಗೊಂಡಿರುವ ಸ್ವಚ್ಛತಾ ಕಾರ್ಯಗಳ ಸಂಪೂರ್ಣ ವಿವರಗಳನ್ನು ಸಂಗ್ರಹಿಸಬೇಕು. ಯಾವ ಇಲಾಖೆ ಯಾವ ಪ್ರದೇಶದಲ್ಲಿ ಎಷ್ಟು ಪ್ರಮಾಣದ ತ್ಯಾಜ್ಯ ತೆರವುಗೊಳಿಸಿದೆ ಎಂಬುದರ ಕುರಿತು ಸಮಗ್ರ ಮಾಹಿತಿ ಹೊಂದಿರಬೇಕು. ಅಭಿಯಾನದ ಪ್ರಗತಿ ಹಾಗೂ ಸಾಧನೆಗಳ ಬಗ್ಗೆ ಸಾರ್ವಜನಿಕರಿಗೂ ಮಾಹಿತಿ ಲಭ್ಯವಾಗುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ನಗರದಲ್ಲಿ ತ್ಯಾಜ್ಯ ನಿರ್ವಹಣೆಗೆ ಸಂಬಂಧಿಸಿದಂತೆ ಸಣ್ಣ ಸಮಸ್ಯೆಯೇ ಆಗಿದ್ದರೂ ಅದನ್ನು ನಿರ್ಲಕ್ಷಿಸಬಾರದು. ವಿವಿಧ ಇಲಾಖೆಗಳ ನಡುವೆ ಉತ್ತಮ ಸಮನ್ವಯ ಸಾಧಿಸುವ ಮೂಲಕ ಸಮಸ್ಯೆಗಳನ್ನು ತ್ವರಿತವಾಗಿ ಪರಿಹರಿಸಬೇಕು. ಸ್ವಚ್ಛತಾ ಕಾರ್ಯ ಒಂದು ಇಲಾಖೆಯ ಜವಾಬ್ದಾರಿ ಮಾತ್ರವಲ್ಲದೆ, ಸಂಬಂಧಪಟ್ಟ ಎಲ್ಲ ಇಲಾಖೆಗಳ ಸಹಕಾರದಿಂದ ಪರಿಣಾಮಕಾರಿಯಾಗಿ ನಡೆಸಬೇಕು ಎಂದು ಸಚಿವರು ಹೇಳಿದರು.

ಮಳೆಗಾಲದ ಹಿನ್ನೆಲೆಯಲ್ಲಿ ತ್ಯಾಜ್ಯ ತೆರವು ಹಾಗೂ ವಿಲೇವಾರಿ ಕಾರ್ಯಗಳಿಗೆ ಯಾವುದೇ ರೀತಿಯ ಅಡ್ಡಿಯಾಗದಂತೆ ಅಧಿಕಾರಿಗಳು ಮುನ್ನೆಚ್ಚರಿಕೆ ವಹಿಸಬೇಕು. ಸರ್ಕಾರ ನಿಗದಿಪಡಿಸಿರುವ ಕ್ವಾರಿ ಹಾಗೂ ತ್ಯಾಜ್ಯ ವಿಲೇವಾರಿ ಸ್ಥಳಗಳಲ್ಲಿಯೇ ನಿರ್ಮಾಣ ಮತ್ತು ಕೆಡವುವಿಕೆ ತ್ಯಾಜ್ಯವನ್ನು ವಿಲೇವಾರಿ ಮಾಡಬೇಕು. ಎಲ್ಲೆಂದರಲ್ಲಿ ತ್ಯಾಜ್ಯ ಸುರಿಯುವ ಮೂಲಕ ಹೊಸ ಸಮಸ್ಯೆ ಸೃಷ್ಟಿಯಾಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಈಗಾಗಲೇ ಸ್ವಚ್ಛಗೊಳಿಸಿರುವ ಸಾರ್ವಜನಿಕ ಸ್ಥಳಗಳಲ್ಲಿ ಮತ್ತೆ ಅಕ್ರಮವಾಗಿ ತ್ಯಾಜ್ಯ ಸುರಿಯದಂತೆ ನಿಗಾ ವ್ಯವಸ್ಥೆ ಬಲಪಡಿಸಬೇಕು. ತೆರವುಗೊಳಿಸಿದ ಸ್ಥಳಗಳಲ್ಲಿ ಮರುಕಳಿಸಿ ತ್ಯಾಜ್ಯ ಸುರಿಯುತ್ತಿರುವುದು ಕಂಡುಬಂದರೆ, ಸಂಬಂಧಪಟ್ಟವರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಬೇಕು ಎಂದು ಸಚಿವರು ಸೂಚಿಸಿದರು.

**ಮಾರ್ಷಲ್‌ಗಳಿಗೆ ಮೂಲಸೌಕರ್ಯ ವ್ಯವಸ್ಥೆ:** ಸರ್ಕಾರ ನಿಗದಿಪಡಿಸಿರುವ ನಿರ್ಮಾಣ ಮತ್ತು ಕೆಡವುವಿಕೆ ತ್ಯಾಜ್ಯ ವಿಲೇವಾರಿ ಸ್ಥಳಗಳಲ್ಲಿ ಕಾರ್ಯಾಚರಣೆಯ ಮೇಲ್ವಿಚಾರಣೆಗಾಗಿ ಈಗಾಗಲೇ ಮಾರ್ಷಲ್‌ಗಳನ್ನು ನಿಯೋಜಿಸಲಾಗಿದೆ. ತ್ಯಾಜ್ಯ ವಿಲೇವಾರಿ ಕಾರ್ಯದಲ್ಲಿ ತೊಡಗಿರುವ ಮಾರ್ಷಲ್‌ಗಳಿಗೆ ಅಗತ್ಯ ಮೂಲಸೌಕರ್ಯ ಒದಗಿಸಬೇಕು. ಅವರಿಗೆ ಆಶ್ರಯ, ಕುಡಿಯುವ ನೀರು ಹಾಗೂ ಆಹಾರದ ವ್ಯವಸ್ಥೆ ಕಲ್ಪಿಸಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು.

ಇದೇ ವೇಳೆ, ತ್ಯಾಜ್ಯ ವಿಲೇವಾರಿ ಸ್ಥಳಗಳಿಗೆ ಆಗಮಿಸುವ ಟಿಪ್ಪರ್ ಲಾರಿಗಳ ವಿವರಗಳನ್ನು ಸಮರ್ಪಕವಾಗಿ ದಾಖಲಿಸುವಂತೆ ಸೂಚಿಸಿದರು. ಯಾವ ವಾಹನ ಯಾವ ಸಮಯಕ್ಕೆ ಸ್ಥಳಕ್ಕೆ ಬಂದಿದೆ, ಎಷ್ಟು ಪ್ರಮಾಣದ ತ್ಯಾಜ್ಯ ತಂದಿದೆ ಹಾಗೂ ಯಾವ ಸಮಯಕ್ಕೆ ಸ್ಥಳದಿಂದ ಹೊರಟಿದೆ ಎಂಬ ಮಾಹಿತಿಯನ್ನು ದಾಖಲಿಸಿಕೊಂಡು ಕಾರ್ಯಾಚರಣೆ ಯಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಬೇಕು ಎಂದು ಹೇಳಿದರು.

ಪ್ರಸ್ತುತ ಐದು ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ನಿರ್ಮಾಣ ಮತ್ತು ಕೆಡವುವಿಕೆ ತ್ಯಾಜ್ಯ ತೆರವು ಕಾರ್ಯಾಚರಣೆಗಾಗಿ 54 ಟಿಪ್ಪರ್ ಲಾರಿಗಳು ಹಾಗೂ 18 ಅರ್ಥ್ ಮೂವರ್‌ಗಳನ್ನು ನಿಯೋಜಿಸಲಾಗಿದೆ. ಆದರೆ ಅಭಿಯಾನದ ವೇಗವನ್ನು ಮತ್ತಷ್ಟು ಹೆಚ್ಚಿಸುವ ಅಗತ್ಯವಿರುವ ಹಿನ್ನೆಲೆಯಲ್ಲಿ ಅಗತ್ಯವಿರುವ ಕಡೆ ಹೆಚ್ಚುವರಿ ಟಿಪ್ಪರ್ ಲಾರಿಗಳನ್ನು ನಿಯೋಜಿಸುವಂತೆ ಸಚಿವರು ಸೂಚಿಸಿದರು.

ಅದೇ ರೀತಿ, ತ್ಯಾಜ್ಯ ತೆರವು ಕಾರ್ಯ ನಡೆಯುತ್ತಿರುವ ಪ್ರದೇಶಗಳಲ್ಲಿ ಅಗತ್ಯಕ್ಕೆ ಅನುಗುಣವಾಗಿ ಹೆಚ್ಚುವರಿ ಅರ್ಥ್ ಮೂವರ್‌ಗಳು ಹಾಗೂ ಟ್ರ್ಯಾಕ್ಟರ್‌ಗಳನ್ನು ಗರಿಷ್ಠ ಪ್ರಮಾಣದಲ್ಲಿ ಬಳಸಿಕೊಳ್ಳಬೇಕು. ಯಂತ್ರೋಪಕರಣಗಳ ಕೊರತೆಯಿಂದ ಯಾವುದೇ ಪ್ರದೇಶದಲ್ಲಿ ತ್ಯಾಜ್ಯ ತೆರವು ಕಾರ್ಯ ಸ್ಥಗಿತಗೊಳ್ಳದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

**3,022 ಅಕ್ರಮ ತ್ಯಾಜ್ಯ ಸುರಿಯುವ ಸ್ಥಳಗಳ ಗುರುತು:** ನಗರದ ವಿವಿಧ ಭಾಗಗಳಲ್ಲಿ ನಿರ್ಮಾಣ ಮತ್ತು ಕೆಡವುವಿಕೆ ತ್ಯಾಜ್ಯವನ್ನು ಅಕ್ರಮವಾಗಿ ಸುರಿಯಲಾಗುತ್ತಿರುವ 3,022 ಸ್ಥಳಗಳನ್ನು ಅಧಿಕಾರಿಗಳು ಹಾಗೂ ಮಾರ್ಷಲ್‌ಗಳು ಇದುವರೆಗೆ ಗುರುತಿಸಿದ್ದಾರೆ. ಈ ಸ್ಥಳಗಳಲ್ಲಿ ಒಟ್ಟಾರೆ ಅಂದಾಜು 59,823 ಟನ್ ತ್ಯಾಜ್ಯ ಸಂಗ್ರಹವಾಗಿರುವ ಸಾಧ್ಯತೆ ಇದೆ ಎಂದು ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದ್ದಾರೆ.

ಗುರುತಿಸಲಾಗಿರುವ ಪ್ರತಿಯೊಂದು ಸ್ಥಳಕ್ಕೂ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಈಗಾಗಲೇ ಗುರುತಿಸಿ ದಾಖಲಿಸಿರುವ ಸ್ಥಳಗಳೊಂದಿಗೆ ಹೊಸದಾಗಿ ಗುರುತಿಸಲಾದ ಸ್ಥಳಗಳು ಪುನರಾವರ್ತನೆಯಾಗದಂತೆ ಖಚಿತಪಡಿಸಿ ಕೊಳ್ಳಬೇಕು. ಸ್ಥಳದ ನಿಖರ ಮಾಹಿತಿ, ತ್ಯಾಜ್ಯದ ಪ್ರಮಾಣ ಹಾಗೂ ತೆರವು ಕಾರ್ಯದ ಪ್ರಗತಿಯನ್ನು ದಾಖಲಿಸಬೇಕು ಎಂದು ಸಚಿವರು ಸೂಚಿಸಿದರು.

ಇದೇ ವೇಳೆ, ತ್ಯಾಜ್ಯ ತೆರವು ಕಾರ್ಯಾಚರಣೆಯಲ್ಲಿ ತೊಡಗಿರುವ ಟಿಪ್ಪರ್ ಲಾರಿಗಳ ಸಂಚಾರಕ್ಕೆ ಪೀಕ್ ಅವರ್‌ನಲ್ಲಿ ಸಂಚಾರ ಪೊಲೀಸರು ನಿರ್ಬಂಧ ವಿಧಿಸುತ್ತಿರುವುದರಿಂದ ಅಭಿಯಾನಕ್ಕೆ ಅಡಚಣೆಯಾಗುತ್ತಿದೆ ಎಂಬ ವಿಚಾರವೂ ಸಭೆಯಲ್ಲಿ ಚರ್ಚೆಯಾಯಿತು.

ಪ್ರಸ್ತುತ ಬೆಳಗ್ಗೆ 7ರಿಂದ 10ರವರೆಗೆ ಹಾಗೂ ಸಂಜೆ 5ರಿಂದ ರಾತ್ರಿ 9ರವರೆಗೆ ಟಿಪ್ಪರ್ ಲಾರಿಗಳ ಸಂಚಾರಕ್ಕೆ ನಿರ್ಬಂಧ ಇರುವುದರಿಂದ ತ್ಯಾಜ್ಯ ತೆರವು ಕಾರ್ಯಾಚರಣೆಯ ವೇಗ ಕುಂಠಿತವಾಗುತ್ತಿದೆ ಎಂದು ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು.

ಈ ಹಿನ್ನೆಲೆಯಲ್ಲಿ ತ್ಯಾಜ್ಯ ಮುಕ್ತ ಅಭಿಯಾನದಲ್ಲಿ ಬಳಸಲಾಗುತ್ತಿರುವ ವಾಹನಗಳಿಗೆ ಅಗತ್ಯ ಸಮಯದಲ್ಲಿ ಸಂಚರಿಸಲು ಅವಕಾಶ ಕಲ್ಪಿಸುವ ಕುರಿತು ಹಿರಿಯ ಸಂಚಾರ ಪೊಲೀಸ್ ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಜಿಬಿಎ ಮುಖ್ಯ ಆಯುಕ್ತರಿಗೆ ಸಚಿವರು ಸೂಚನೆ ನೀಡಿದ್ದಾರೆ.

ಬೆಂಗಳೂರನ್ನು ತ್ಯಾಜ್ಯ ಮುಕ್ತ ನಗರವನ್ನಾಗಿ ಮಾಡುವ ಉದ್ದೇಶದಿಂದ ಆರಂಭಿಸಿರುವ ಅಭಿಯಾನವನ್ನು ಮತ್ತಷ್ಟು ವೇಗಗೊಳಿಸಲು ಸರ್ಕಾರ ಮುಂದಾಗಿದ್ದು, ಅಕ್ರಮವಾಗಿ ತ್ಯಾಜ್ಯ ಸುರಿಯುವ ಸ್ಥಳಗಳ ತೆರವು, ಸರ್ಕಾರಿ ಕಚೇರಿಗಳ ಸ್ವಚ್ಛತೆ, ಹೆಚ್ಚುವರಿ ವಾಹನ ಹಾಗೂ ಯಂತ್ರೋಪಕರಣಗಳ ಬಳಕೆ ಮತ್ತು ತ್ಯಾಜ್ಯ ವಿಲೇವಾರಿ ಸ್ಥಳಗಳ ಮೇಲ್ವಿಚಾರಣೆಗೆ ಹೆಚ್ಚಿನ ಒತ್ತು ನೀಡಲಾಗಿದೆ. ಸ್ವಚ್ಛಗೊಳಿಸಿದ ಪ್ರದೇಶಗಳಲ್ಲಿ ಮತ್ತೆ ತ್ಯಾಜ್ಯ ಸಂಗ್ರಹವಾಗದಂತೆ ಕಟ್ಟುನಿಟ್ಟಿನ ನಿಗಾ ವಹಿಸುವ ಮೂಲಕ ಅಭಿಯಾನವನ್ನು ಪರಿಣಾಮಕಾರಿಯಾಗಿ ಮುಂದುವರಿಸುವಂತೆ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ನಗರದ ಪ್ರಮುಖ ರಸ್ತೆ, ಖಾಲಿ ಜಾಗ, ಸರ್ಕಾರಿ ಜಾಗ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಅಕ್ರಮವಾಗಿ ತ್ಯಾಜ್ಯ ಸುರಿಯುವುದನ್ನು ಸಂಪೂರ್ಣವಾಗಿ ತಡೆಯಲು ನಿರಂತರ ನಿಗಾ ವ್ಯವಸ್ಥೆ ರೂಪಿಸುವ ಅಗತ್ಯವಿದೆ ಎಂದು ಸಚಿವರು ಹೇಳಿದರು. ಈಗಾಗಲೇ ತೆರವುಗೊಳಿಸಿರುವ ಸ್ಥಳಗಳಲ್ಲಿ ಮತ್ತೆ ತ್ಯಾಜ್ಯ ಸುರಿಯದಂತೆ ಸ್ಥಳೀಯ ಮಟ್ಟದಲ್ಲಿ ಅಧಿಕಾರಿಗಳು ಹಾಗೂ ಮಾರ್ಷಲ್‌ಗಳು ನಿಯಮಿತವಾಗಿ ಪರಿಶೀಲನೆ ನಡೆಸಬೇಕು. ನಿಯಮ ಉಲ್ಲಂಘಿಸುವವರನ್ನು ಗುರುತಿಸಿ ದಂಡ ಸೇರಿದಂತೆ ಕಾನೂನುಬದ್ಧ ಕ್ರಮ ಕೈಗೊಳ್ಳುವ ಮೂಲಕ ಸಾರ್ವಜನಿಕ ಸ್ಥಳಗಳ ಸ್ವಚ್ಛತೆ ಕಾಪಾಡಬೇಕು ಎಂದು ಸೂಚಿಸಿದರು.

ಅಭಿಯಾನವನ್ನು ಕೇವಲ ತ್ಯಾಜ್ಯ ತೆರವುಗೊಳಿಸುವ ಕಾರ್ಯಕ್ಕೆ ಸೀಮಿತಗೊಳಿಸದೆ, ಮುಂದೆ ಅಕ್ರಮವಾಗಿ ತ್ಯಾಜ್ಯ ಸಂಗ್ರಹವಾಗದಂತೆ ಶಾಶ್ವತ ವ್ಯವಸ್ಥೆ ರೂಪಿಸುವಂತೆ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದರು. ಸಾರ್ವಜನಿಕರು ಕೂಡ ತಮ್ಮ ಜವಾಬ್ದಾರಿಯನ್ನು ಅರಿತು ನಿರ್ಮಾಣ ಹಾಗೂ ಕೆಡವುವಿಕೆ ತ್ಯಾಜ್ಯವನ್ನು ನಿಗದಿತ ಸ್ಥಳಗಳಲ್ಲಿಯೇ ವಿಲೇವಾರಿ ಮಾಡುವ ಮೂಲಕ ನಗರವನ್ನು ಸ್ವಚ್ಛವಾಗಿಡಲು ಸಹಕರಿಸಬೇಕು ಎಂದು ಅವರು ಮನವಿ ಮಾಡಿದರು.

# 1.70 ಕೋಟಿ ರೂ ಕಾಮಗಾರಿಗೆ ಶಾಸಕ ಚಾಲನೆ



**ಯಳಂದೂರು:** ತಾಲೂಕಿನ ಹೊನ್ನೂರು ಹಾಗೂ ಕೆಸ್ತೂರು ಗ್ರಾಮದ ವಿವಿಧ ಸಮುದಾಯದ ರಸ್ತೆ, ಚರಂಡಿ ಅಭಿವೃದ್ಧಿಗೆ 1.70 ಕೋಟಿ ರೂ. ವೆಚ್ಚದ ಕಾಮಗಾರಿಗೆ ಶಾಸಕ ಎ.ಆರ್. ಕೃಷ್ಣಮೂರ್ತಿ ಶುಕ್ರವಾರ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ನಮ್ಮ ಕ್ಷೇತ್ರಕ್ಕೆ ಇದುವರೆವಿಗೂ 500 ಕೋಟಿ ರೂ.ಗೂ ಹೆಚ್ಚು ಅನುದಾನವನ್ನು ನಾನು ತಂದಿದ್ದೇನೆ. ಹಳೇ ಮೈಸೂರು ಭಾಗದ ನೀರಾವರಿ ಯೋಜನೆಗಳಿಗೆ ಈಚೆಗೆ ಅನುದಾವನ್ನೇ ನೀಡಿರಲಿಲ್ಲ. ಈ ಹಿಂದೆ ಜಲಸಂಪನ್ಮೂಲ ಸಚಿವರೂ ಆಗಿದ್ದ ಡಿ.ಕೆ. ಶಿವಕುಮಾರ್ ನಮ್ಮ ಜಿಲ್ಲೆಯ ನೀರಾವರಿ ಯೋಜನೆ ಕಾಮಗಾರಿಗಳಿಗೆ ಅನುದಾನ ನೀಡುವ ಭರವಸೆ ನೀಡಿದ್ದರು. ಅದರಂತೆ ನನ್ನ ಕ್ಷೇತ್ರಕ್ಕೆ 70 ಕೋಟಿ ರೂ. ಹನೂರು ಹಾಗೂ ಕೊಳ್ಳೇಗಾಲ ಎರಡೂ ಕ್ಷೇತ್ರಕ್ಕೆ ಒಳಪಡುವ ಕಾಮಗಾರಿಗೆ 50 ಕೋಟಿ ರೂ. ಸೇರಿದಂತೆ ಒಟ್ಟು 120 ಕೋಟಿ ರೂ. ಅನುದಾನ ನೀಡಿದ್ದಾರೆ. ಇದರಲ್ಲಿ ಕ್ಷೇತ್ರ ವ್ಯಾಪ್ತಿಗೆ ಒಳಪಡುವ ಯಳಂದೂರು, ಯರಿಯೂರು, ಕೆಸ್ತೂರು, ಮದ್ದೂರು, ಅಗರ, ತೇರಂಬಳ್ಳಿ ಕೆರೆ ಹಾಗೂ ಕಾಲುವೆ ಅಭಿವೃದ್ಧಿ ಕಾಮಗಾರಿಗಳಿಗೆ ಈಗಾಗಲೇ ಚಾಲನೆ ನೀಡಲಾಗಿದ್ದು ಕೆಲಸ ಪ್ರಗತಿಯಲ್ಲಿದೆ. ನಮ್ಮ ಭಾಗದ ನೀರಾವರಿ ಯೋಜನೆಗಳಿಗೆ ಅನುದಾನವನ್ನು ನೀಡಿ ಹಲವು ದಶಕಗಳೇ ಕಳೆದಿವೆ. ಇಲ್ಲಿಗೆ ಮತ್ತಷ್ಟು ಅನುದಾನ ತರುವ ನಿಟ್ಟಿನಲ್ಲಿ ನಮ್ಮ ಜಿಲ್ಲೆಯ ಶಾಸಕರ ಪ್ರಯತ್ನ ನಿರಂತರವಾಗಿರುತ್ತದೆ.

ನಾನು ಜನರಿಂದ ಆಯ್ಕೆಯಾಗಿದ್ದು ಜನ ಕಾಯಕ ನನ್ನ ನಿತ್ಯ ಕೆಲಸವಾಗಿದೆ. ಯಾವುದೇ ಧರ್ಮ, ಜಾತಿ ತಾರತಮ್ಯ ಮಾಡದೆ ಎಲ್ಲರಿಗೂ ಅನುದಾನವನ್ನು ನಾನು ನೀಡುತ್ತೇನೆ. ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಲು ನಾನು ಸದಾ ಸಿದ್ಧನಿದ್ದೇನೆ. ಯಳಂದೂರಿನಲ್ಲಿ 33 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣಗೊಳ್ಳುತ್ತಿರುವ ಆಸ್ಪತ್ರೆ ಕಾಮಗಾರಿ ಮುಗಿಯುವ ಹಂತದಲ್ಲಿದ್ದು ಶೀಘ್ರದಲ್ಲೇ ಇದನ್ನು ಉದ್ಘಾಟಿಸಲಾಗುವುದು. ಇದರೊಂದಿಗೆ ಅಗ್ನಿಶಾಮಕ ಠಾಣೆಗೂ ಕಾಮಗಾರಿಗೂ ಚಾಲನೆ ನೀಡಲಾಗುವುದು ಎಂದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷ ಎಚ್.ವಿ. ಚಂದ್ರು ಮಾತನಾಡಿ, ಶಾಸಕರು ಒಟ್ಟು 3 ಸರ್ಕಾರಿ ಪಬ್ಲಿಕ್ ಶಾಲೆಯನ್ನು ತಂದಿದ್ದಾರೆ. ಇದರೊಂದಿಗೆ ಇನ್ನೂ 3 ಶಾಲೆಗಳಿಗೂ ಬೇಡಿಕೆ ಸಲ್ಲಿಸಿದ್ದು ಇದೂ ಕೂಡ ಮಂಜೂರಾಗುವ ಭರವಸೆಯನ್ನು ನೀಡಲಾಗಿದೆ. ಪಂಚ ಗ್ಯಾರಂಟಿ ಯೋಜನೆಗಳಿಂದ ಜಿಲ್ಲೆಯ ಪ್ರತಿ ಪಂಚಾಯಿತಿಗೂ ಮಾಸಿಕ 2 ರಿಂದ 3 ಕೋಟಿ ರೂ. ಲಭಿಸುತ್ತಿದ್ದು ಜನರ ಜೀವನ ಮಟ್ಟ ಸುಧಾರಿಸಿದೆ ಎಂದು ಮಾಹಿತಿ ನೀಡಿದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲೂಕು ಅಧ್ಯಕ್ಷ ಕಿನಕಹಳ್ಳಿ ಪ್ರಭುಪ್ರಸಾದ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್ ಕೆಸ್ತೂರು ಗ್ರಾಮದ ಪ್ರೊ. ಮಹೇಶ್ ಮಾತನಾಡಿದರು. ಪಿಡಿಒ ನಿರಂಜನ್, ಮಹದೇವಸ್ವಾಮಿ, ತಾಪಂ ಮಾಜಿ ಅಧ್ಯಕ್ಷ ನಿರಂಜನ್, ಗ್ರಾಪಂ ಮಾಜಿ ಅಧ್ಯಕ್ಷ ಗುರುಪ್ರಸಾದ್, ಮಹದೇವಸ್ವಾಮಿ ಮಾಜಿ ಸದಸ್ಯ ಆರ್. ಪುಟ್ಟಬಸವಯ್ಯ ಚಾಮುಲ್ ನಿರ್ದೇಶಕ ಕಮರವಾಡಿ ರೇವಣ್ಣ, ಎಇಇ ಚಿಕ್ಕಲಿಂಗಯ್ಯ, ಚಂದ್ರಶೇಖರ್, ಆನಂದ. ಮಹೇಶ್, ಡಿ.ಎನ್. ನಾಗರಾಜು, ರಾಜಣ್ಣ ಸೇರಿದಂತೆ ಅನೇಕರು ಇದ್ದರು.

# ಎಕ್ಸ್‌ಪ್ರೆಸ್‌ವೇನಲ್ಲಿ ಭೀಕರ ಅಪಘಾತ: ಚಾಲಕ ಹಾಗೂ ಕಂಡಕ್ಟರ್ ಸಾವು



**ಬಿಡದಿ:** ಬೆಂಗಳೂರು–ಮೈಸೂರು ದಶಪಥ ಎಕ್ಸ್‌ಪ್ರೆಸ್‌ವೇನಲ್ಲಿ ಶನಿವಾರ ಮುಂಜಾನೆ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಕೇರಳ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಸೇರಿದ ಬಸ್ ನಿಯಂತ್ರಣ ತಪ್ಪಿ ರಸ್ತೆ ಬದಿಯಲ್ಲಿದ್ದ ಬೃಹತ್ ಸೈನ್‌ಬೋರ್ಡ್‌ಗೆ ಡಿಕ್ಕಿ ಹೊಡೆದು ಪಲ್ಟಿಯಾದ ಪರಿಣಾಮ ಚಾಲಕ ಹಾಗೂ ಕಂಡಕ್ಟರ್ ಸೇರಿ ಇಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅಪಘಾತದಲ್ಲಿ ಬಸ್‌ನಲ್ಲಿದ್ದ 14ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿದ್ದು, ಕೆಲವರ ಸ್ಥಿತಿ ಗಂಭೀರವಾಗಿದೆ ಎಂದು ತಿಳಿದುಬಂದಿದೆ.

**ಏನಿದು ಘಟನೆ?:** ಶನಿವಾರ ಮುಂಜಾನೆ ಬೆಂಗಳೂರು–ಮೈಸೂರು ದಶಪಥ ಎಕ್ಸ್‌ಪ್ರೆಸ್‌ವೇನಲ್ಲಿ ಈ ದುರ್ಘಟನೆ ಸಂಭವಿಸಿದೆ. ಕೇರಳ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಸೇರಿದ ಬಸ್ ಕೇರಳದ ಕೋಝಿಕ್ಕೋಡ್‌ನಿಂದ ಬೆಂಗಳೂರಿನತ್ತ ಪ್ರಯಾಣಿಸುತ್ತಿತ್ತು. ರಾಮನಗರ ತಾಲೂಕಿನ ಬಿಡದಿ ಪೊಲೀಸ್ ಠಾಣಾ ವ್ಯಾಪ್ತಿಯ ಅವರಗೆರೆ ಗೇಟ್ ಬ್ರಿಡ್ಜ್ ಸಮೀಪ ಬಸ್ ಸಂಚರಿಸುತ್ತಿದ್ದ ವೇಳೆ ಏಕಾಏಕಿ ನಿಯಂತ್ರಣ ಕಳೆದುಕೊಂಡಿದೆ.

ನಿಯಂತ್ರಣ ತಪ್ಪಿದ ಬಸ್ ಹೆದ್ದಾರಿಯ ಎಡಭಾಗಕ್ಕೆ ಚಲಿಸಿ ರಸ್ತೆ ಬದಿಯಲ್ಲಿ ಅಳವಡಿಸಲಾಗಿದ್ದ ಬೃಹತ್ ಕಬ್ಬಿಣದ ಸೈನ್‌ಬೋರ್ಡ್‌ಗೆ ಭಾರೀ ವೇಗದಲ್ಲಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಸೈನ್‌ಬೋರ್ಡ್‌ನ ಕಂಬಗಳು ಮುರಿದು ಬೃಹತ್ ಫಲಕ ಸಂಪೂರ್ಣವಾಗಿ ಕುಸಿದು ಬಿದ್ದಿದೆ. ಬಳಿಕ ಬಸ್ ಕೂಡ ನಿಯಂತ್ರಣ ತಪ್ಪಿ ಹೆದ್ದಾರಿಯಲ್ಲೇ ಒಂದು ಬದಿಗೆ ಪಲ್ಟಿಯಾಗಿದೆ.

ಅಪಘಾತದ ತೀವ್ರತೆಗೆ ಬಸ್‌ನ ಮುಂಭಾಗ ಸೇರಿದಂತೆ ಹಲವು ಭಾಗಗಳು ಹಾನಿಗೊಳಗಾಗಿದ್ದು, ಒಳಗಿದ್ದ ಪ್ರಯಾಣಿಕರಲ್ಲಿ ಕೆಲವರು ಬಸ್‌ನೊಳಗೆ ಸಿಲುಕಿಕೊಂಡಿದ್ದರು. ಅಪಘಾತದ ಸದ್ದು ಕೇಳುತ್ತಿದ್ದಂತೆ ಸ್ಥಳೀಯರು ಹಾಗೂ ವಾಹನ ಸವಾರರು ನೆರವಿಗೆ ಧಾವಿಸಿ ಗಾಯಾಳುಗಳನ್ನು ಬಸ್‌ನಿಂದ ಹೊರತೆಗೆದು ರಕ್ಷಣಾ ಕಾರ್ಯ ನಡೆಸಿದರು.

ಈ ಭೀಕರ ಅಪಘಾತದಲ್ಲಿ ಬಸ್ ಚಾಲಕ ಮಿಥಿಲೇಶ್ ಹಾಗೂ ಕಂಡಕ್ಟರ್ ಅರುಣ್ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಗುರುತಿಸಲಾಗಿದೆ. ಬಸ್‌ನಲ್ಲಿದ್ದ 14ಕ್ಕೂ ಹೆಚ್ಚು ಪ್ರಯಾಣಿಕರು ಗಾಯಗೊಂಡಿದ್ದು, ಅವರನ್ನು ತಕ್ಷಣವೇ ಸಮೀಪದ ಆಸ್ಪತ್ರೆಗಳಿಗೆ ರವಾನಿಸಿ ಚಿಕಿತ್ಸೆ ನೀಡಲಾಗಿದೆ. ಗಾಯಾಳುಗಳಲ್ಲಿ ಕೆಲವರಿಗೆ ಗಂಭೀರ ಸ್ವರೂಪದ ಗಾಯಗಳಾಗಿರುವುದರಿಂದ ಹೆಚ್ಚಿನ ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ತಿಳಿದುಬಂದಿದೆ.

**ಅಪಘಾತಕ್ಕೆ ಕಾರಣವೇನು?:** ಪೊಲೀಸರ ಪ್ರಾಥಮಿಕ ತನಿಖೆಯ ಪ್ರಕಾರ, ಮುಂಜಾನೆ ಬಸ್ ಚಾಲನೆ ಮಾಡುತ್ತಿದ್ದ ವೇಳೆ ಚಾಲಕನಿಗೆ ನಿದ್ದೆಯ ಮಂಪರು ಆವರಿಸಿರುವ ಸಾಧ್ಯತೆಯೇ ಅಪಘಾತಕ್ಕೆ ಪ್ರಮುಖ ಕಾರಣ ಎಂದು ಶಂಕಿಸಲಾಗಿದೆ. ನಿದ್ದೆಯ ಮಂಪರಿನಿಂದ ಚಾಲಕನ ನಿಯಂತ್ರಣ ತಪ್ಪಿ ಬಸ್ ನಿಧಾನವಾಗಿ ಹೆದ್ದಾರಿಯ ಎಡಭಾಗಕ್ಕೆ ಚಲಿಸಿದೆ ಎನ್ನಲಾಗಿದೆ.

ಈ ವೇಳೆ ರಸ್ತೆ ಬದಿಯಲ್ಲಿ ಅಳವಡಿಸಲಾಗಿದ್ದ ಬೃಹತ್ ಕಬ್ಬಿಣದ ಸೈನ್‌ಬೋರ್ಡ್‌ನ ಕಂಬಕ್ಕೆ ಬಸ್ ನೇರವಾಗಿ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಸೈನ್‌ಬೋರ್ಡ್ ಸಂಪೂರ್ಣವಾಗಿ ನೆಲಕ್ಕುರುಳಿದ್ದು, ಬಸ್ ಕೂಡ ಹೆದ್ದಾರಿಯಲ್ಲಿ ಪಲ್ಟಿಯಾಗಿದೆ.

ಅಪಘಾತದ ಮಾಹಿತಿ ತಿಳಿಯುತ್ತಿದ್ದಂತೆ ಬಿಡದಿ ಪೊಲೀಸ್ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ರಕ್ಷಣಾ ಕಾರ್ಯಾಚರಣೆ ನಡೆಸಿ ರಸ್ತೆ ಮೇಲೆ ಬಿದ್ದಿದ್ದ ಬಸ್ ಹಾಗೂ ಸೈನ್‌ಬೋರ್ಡ್ ತೆರವುಗೊಳಿಸುವ ಕ್ರಮ ಕೈಗೊಳ್ಳಲಾಗಿದೆ. ಅಪಘಾತದಿಂದ ಎಕ್ಸ್‌ಪ್ರೆಸ್‌ವೇನಲ್ಲಿ ಕೆಲಕಾಲ ಸಂಚಾರಕ್ಕೂ ಅಡಚಣೆ ಉಂಟಾಗಿತ್ತು.

ಪೊಲೀಸರು ಅಪಘಾತದ ನಿಖರ ಕಾರಣದ ಕುರಿತು ತನಿಖೆ ಮುಂದುವರಿಸಿದ್ದು, ಚಾಲಕನಿಗೆ ನಿದ್ದೆ ಬಂದಿತ್ತೇ, ವಾಹನದ ವೇಗ ಎಷ್ಟಿತ್ತು ಹಾಗೂ ಬಸ್‌ನ ತಾಂತ್ರಿಕ ಸ್ಥಿತಿ ಹೇಗಿತ್ತು ಎಂಬ ಅಂಶಗಳನ್ನೂ ಪರಿಶೀಲಿಸುತ್ತಿದ್ದಾರೆ. ಘಟನೆಗೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿ ತನಿಖೆಯ ಬಳಿಕ ಹೊರಬೀಳಬೇಕಿದೆ.

RAJARATHA CYBER
All Online Services Under One Roof!
• Aadhaar, PAN Card, Voter ID, Ration Card
• e-Khata, Senior Citizen Card
& Other Government Services
• Address: Junior College Road, Nelamangala
Contact: 9886926812 for medicts

# ಕೇಂದ್ರ ಸರ್ಕಾರದ ವಿರುದ್ಧ ಸಿಪಿಐ ಕಾರ್ಯಕರ್ತರ ಪರಿವರ್ತನಾ ಪಾದಯಾತ್ರೆ




**ಸಕಲೇಶಪುರ:** ಕೇಂದ್ರದಲ್ಲಿ ರಾಜಕೀಯ ಬದಲಾವಣೆ ಯಾಗಬೇಕು ಹಾಗೂ ಜನಪರ ಆಡಳಿತಕ್ಕೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿ ಭಾರತ ಕಮ್ಯೂನಿಸ್ಟ್ ಪಕ್ಷದ (ಸಿಪಿಐ) ಕಾರ್ಯಕರ್ತರು ಶುಕ್ರವಾರ ಸಕಲೇಶಪುರ ಪಟ್ಟಣದಲ್ಲಿ ಪರಿವರ್ತನಾ ಪಾದಯಾತ್ರೆ ನಡೆಸಿದರು. ಕೇಂದ್ರ ಸರ್ಕಾರದ ನೀತಿಗಳನ್ನು ಖಂಡಿಸಿ ಹಾಗೂ ವಿವಿಧ ಜನಪರ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಆಯೋಜಿಸಿದ್ದ ಈ ಪಾದಯಾತ್ರೆಯಲ್ಲಿ ಪಕ್ಷದ ಕಾರ್ಯಕರ್ತರು ಭಾಗವಹಿಸಿದ್ದರು.

ಪಟ್ಟಣದ ಸಕಲೇಶ್ವರಸ್ವಾಮಿ ದೇವಸ್ಥಾನದ ಮುಖ್ಯ ಬೀದಿಯಿಂದ ಪಾದಯಾತ್ರೆ ಆರಂಭಗೊಂಡಿತು. ವಿವಿಧ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿದ ಕಾರ್ಯಕರ್ತರು ಕೇಂದ್ರ ಸರ್ಕಾರದ ನೀತಿಗಳ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ಪಾದಯಾತ್ರೆ ಪಟ್ಟಣದ ಹಳೆ ಬಸ್ ನಿಲ್ದಾಣದಲ್ಲಿ ಅಂತ್ಯಗೊಂಡಿತು.

**ಕೇಂದ್ರ ಸರ್ಕಾರದ ವಿರುದ್ಧ ಆರೋಪ:** ಹಳೆ ಬಸ್ ನಿಲ್ದಾಣದಲ್ಲಿ ಆಯೋಜಿಸಲಾಗಿದ್ದ ಸಭೆಯಲ್ಲಿ ಮಾತನಾಡಿದ ಸಿಪಿಐ ಜಿಲ್ಲಾ ಸಮಿತಿ ಸದಸ್ಯ ಎಂ.ಸಿ. ಡೋಂಗ್ರೆ, ಕಳೆದ ಒಂದು ದಶಕದ ಅವಧಿಯಲ್ಲಿ ಕೇಂದ್ರ ಸರ್ಕಾರದ ಸಾಧನೆ ಶೂನ್ಯವಾಗಿದೆ ಎಂದು ಆರೋಪಿಸಿದರು. ಎನ್‌ಡಿಎ ಸರ್ಕಾರ ಅಧಿಕಾರಕ್ಕೆ ಬಂದ ನಂತರ ದೇಶದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗಿದ್ದು, ಸಾಮಾನ್ಯ ಜನರು ಹಾಗೂ ಬಡವರು ಜೀವನ ನಡೆಸುವುದು ಕಷ್ಟಕರವಾಗಿದೆ ಎಂದು ಹೇಳಿದರು.

ಪೆಟ್ರೋಲ್ ಮತ್ತು ಇತರ ಇಂಧನಗಳ ಬೆಲೆ ಏರಿಕೆಯಿಂದ ಜನಸಾಮಾನ್ಯರ ಮೇಲೆ ಹೆಚ್ಚಿನ ಆರ್ಥಿಕ ಹೊರೆ ಬಿದ್ದಿದೆ. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಕಚ್ಚಾತೈಲದ ಬೆಲೆ ಕುಸಿದ ಸಂದರ್ಭಗಳಲ್ಲಿಯೂ ದೇಶದಲ್ಲಿ ಪೆಟ್ರೋಲ್ ಬೆಲೆ ನಿರೀಕ್ಷಿತ ಪ್ರಮಾಣದಲ್ಲಿ ಇಳಿಕೆಯಾಗಿಲ್ಲ. ಈ ವಿಚಾರದಲ್ಲಿ ಉದ್ಯಮಿಗಳಿಗೆ ಅನುಕೂಲವಾಗುವಂತಹ ನೀತಿಗಳನ್ನು ಸರ್ಕಾರ ಅನುಸರಿಸುತ್ತಿದೆ ಎಂಬ ಅನುಮಾನ ಮೂಡುತ್ತಿದೆ ಎಂದು ಅವರು ಆರೋಪಿಸಿದರು.

**ನಿರುದ್ಯೋಗದ ಬಗ್ಗೆ ಅಸಮಾಧಾನ:** ದೇಶದಲ್ಲಿ ನಿರುದ್ಯೋಗ ಸಮಸ್ಯೆ ಮುಂದುವರಿದಿದ್ದರೂ ಅದನ್ನು ನಿಯಂತ್ರಿಸಲು ಕೇಂದ್ರ ಸರ್ಕಾರ ಪರಿಣಾಮಕಾರಿ ಕ್ರಮಗಳನ್ನು ಕೈಗೊಂಡಿಲ್ಲ ಎಂದು ಡೋಂಗ್ರೆ ಅಸಮಾಧಾನ ವ್ಯಕ್ತಪಡಿಸಿದರು. ಯುವಜನರಿಗೆ ಉದ್ಯೋಗಾವಕಾಶ ಗಳನ್ನು ಸೃಷ್ಟಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿದ ಅವರು, ನಿರುದ್ಯೋಗ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ಅಗತ್ಯವಿದೆ ಎಂದು ಒತ್ತಾಯಿಸಿದರು.

ಅಂತಾರಾಷ್ಟ್ರೀಯ ಮಟ್ಟದಲ್ಲಿಯೂ ಕೇಂದ್ರ ಸರ್ಕಾರದ ಕೆಲವು ನೀತಿಗಳಿಂದ ದೇಶದ ಗೌರವಕ್ಕೆ ಧಕ್ಕೆಯಾಗುತ್ತಿದೆ ಎಂದು ಅವರು ಆರೋಪಿಸಿದರು. ದೇಶದ ಆರ್ಥಿಕ ಹಾಗೂ ಸಾಮಾಜಿಕ ಹಿತಾಸಕ್ತಿಗಳನ್ನು ಗಮನದಲ್ಲಿಟ್ಟುಕೊಂಡು ನೀತಿಗಳನ್ನು ರೂಪಿಸಬೇಕು ಎಂದು ಹೇಳಿದರು.

**ರಾಜ್ಯ ಸರ್ಕಾರದ ವಿರುದ್ಧವೂ ಟೀಕೆ:** ಇದೇ ವೇಳೆ ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರದ ವಿರುದ್ಧವೂ ಸಿಪಿಐ ಮುಖಂಡರು ಅಸಮಾಧಾನ ವ್ಯಕ್ತಪಡಿಸಿದರು. ಕಾರ್ಮಿಕರು ಹಾಗೂ ದುಡಿಯುವ ವರ್ಗದ ಜನರ ಪರವಾಗಿ ಪರಿಣಾಮಕಾರಿ ನೀತಿಗಳನ್ನು ಜಾರಿಗೆ ತರುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಡೋಂಗ್ರೆ ಆರೋಪಿಸಿದರು.

ಹಿಂದಿನ ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಭೂಸುಧಾರಣಾ ನೀತಿಗಳ ವಿಚಾರದಲ್ಲಿ ಕಾಂಗ್ರೆಸ್ ಸರ್ಕಾರ ಹಲವು ಭರವಸೆಗಳನ್ನು ನೀಡಿದ್ದರೂ, ಅವುಗಳನ್ನು ಈಡೇರಿಸುವಲ್ಲಿ ವಿಳಂಬ ಮಾಡುತ್ತಿದೆ ಎಂದು ಟೀಕಿಸಿದರು. ರೈತರು, ಕಾರ್ಮಿಕರು ಹಾಗೂ ಬಡವರ ಹಿತಾಸಕ್ತಿಯನ್ನು ಕಾಪಾಡುವ ನಿಟ್ಟಿನಲ್ಲಿ ಸರ್ಕಾರಗಳು ಸ್ಪಷ್ಟವಾದ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

**ಕೆಪಿಎಸ್‌ಸಿ ನೇಮಕಾತಿ ವಿಚಾರ ಪ್ರಸ್ತಾಪ:** ರಾಜ್ಯದಲ್ಲಿ ಚರ್ಚೆಗೆ ಗ್ರಾಸವಾಗಿರುವ ಕೆಪಿಎಸ್‌ಸಿ ನೇಮಕಾತಿ ಅಕ್ರಮಗಳ ಆರೋಪಗಳ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಸಿಪಿಐ ಆಗ್ರಹಿಸಿದೆ. ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಬೇಕು ಹಾಗೂ ತಪ್ಪಿತಸ್ಥರು ಯಾರೇ ಆಗಿದ್ದರೂ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮುಖಂಡರು ಒತ್ತಾಯಿಸಿದರು.

ಇದರ ಜೊತೆಗೆ ವಲಸೆ ಕಾರ್ಮಿಕರ ಮಕ್ಕಳಿಗೆ ಶಿಕ್ಷಣದ ಅವಕಾಶಗಳನ್ನು ಕಲ್ಪಿಸುವುದು ಸೇರಿದಂತೆ ಹಲವು ಸಾಮಾಜಿಕ ಹಾಗೂ ಜನಪರ ಬೇಡಿಕೆಗಳನ್ನು ಸರ್ಕಾರಗಳು ಈಡೇರಿಸಬೇಕು ಎಂದು ಸಭೆಯಲ್ಲಿ ಆಗ್ರಹಿಸಲಾಯಿತು.

**ಆ.14ರವರೆಗೆ ಪರಿವರ್ತನಾ ಪಾದಯಾತ್ರೆ:** ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಜನವಿರೋಧಿ ನೀತಿಗಳ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ದೇಶಾದ್ಯಂತ ಪರಿವರ್ತನಾ ಪಾದಯಾತ್ರೆ ನಡೆಸಲಾಗುತ್ತಿದೆ. ಈ ಪಾದಯಾತ್ರೆ ಆಗಸ್ಟ್ 14ರವರೆಗೆ ಮುಂದುವರಿಯಲಿದೆ ಎಂದು ಎಂ.ಸಿ. ಡೋಂಗ್ರೆ ತಿಳಿಸಿದರು.

ಬೆಲೆ ಏರಿಕೆ ನಿಯಂತ್ರಣ, ಉದ್ಯೋಗ ಸೃಷ್ಟಿ, ಕಾರ್ಮಿಕರ ಹಕ್ಕುಗಳ ರಕ್ಷಣೆ, ರೈತರ ಸಮಸ್ಯೆಗಳಿಗೆ ಪರಿಹಾರ, ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಹಾಗೂ ವಲಸೆ ಕಾರ್ಮಿಕರ ಮಕ್ಕಳಿಗೆ ಶಿಕ್ಷಣ ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿಟ್ಟುಕೊಂಡು ಈ ಅಭಿಯಾನ ನಡೆಸಲಾಗುತ್ತಿದೆ ಎಂದು ಅವರು ವಿವರಿಸಿದರು.

ಪಾದಯಾತ್ರೆಯಲ್ಲಿ ತಾಲೂಕು ಕಾರ್ಯದರ್ಶಿ ಹರೀಶ್, ಸುವರ್ಣಾ, ರಾಜು ಸೇರಿದಂತೆ ಪಕ್ಷದ ಹಲವು ಕಾರ್ಯಕರ್ತರು ಹಾಗೂ ಮುಖಂಡರು ಭಾಗವಹಿಸಿದ್ದರು.

# ಲೇಡಿ ಸೂಪರ್ವೈಸರ್ ಬೇಸತ್ತ ಮಹಿಳೆ: ಕೀಟನಾಶಕ ಸೇವಿಸಿ ಆತ್ಮಹತ್ಯೆ



**ಮೈಸೂರು:** ತನ್ನದಲ್ಲದ ತಪ್ಪಿಗೆ ಕೆಲಸದ ಸ್ಥಳದಲ್ಲಿ ಟಾರ್ಗೆಟ್ ಮಾಡಿ ಕಿರುಕುಳ ನೀಡಲಾಗುತ್ತಿದೆ ಎಂದು ಆರೋಪಿಸಿ ಮಹಿಳೆಯೊಬ್ಬರು ಕೀಟನಾಶಕ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಮೈಸೂರಿನ ಹಿನಕಲ್‌ನಲ್ಲಿ ನಡೆದಿದೆ. ಆತ್ಮಹತ್ಯೆಗೂ ಮುನ್ನ ಮಹಿಳೆ ಡೆತ್‌ನೋಟ್ ಬರೆದಿಟ್ಟಿದ್ದು, ಅದರಲ್ಲಿ ಕಂಪನಿಯ ಲೇಡಿ ಸೂಪರ್ವೈಸರ್ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿರುವುದಾಗಿ ತಿಳಿದುಬಂದಿದೆ.

ಮೃತ ಮಹಿಳೆಯನ್ನು ನಾಗೇಶ್ವರಿ ಎಂದು ಗುರುತಿಸಲಾಗಿದೆ. ಅವರು ಖಾಸಗಿ ಕಂಪನಿಯೊಂದರಲ್ಲಿ ಪ್ರಮೋಟರ್ ಆಗಿ ಕೆಲಸ ಮಾಡುತ್ತಿದ್ದರು. ಕೆಲಸದ ಸ್ಥಳದಲ್ಲಿ ಎದುರಾದ ಸಮಸ್ಯೆ ಹಾಗೂ ಮಾನಸಿಕ ಕಿರುಕುಳದಿಂದ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.

**ನಾಲ್ಕು ದಿನಗಳ ಹಿಂದೆ ಬಂದಿದ್ದ ಸೂಪರ್ವೈಸರ್:** ನಾಗೇಶ್ವರಿ ಕೆಲಸ ಮಾಡುತ್ತಿದ್ದ ಕಂಪನಿಗೆ ನಾಲ್ಕು ದಿನಗಳ ಹಿಂದೆ 'ಡಾಲಿ' ಎಂಬ ಮಹಿಳೆ ಸೂಪರ್ವೈಸರ್ ಆಗಿ ಬಂದಿದ್ದರು ಎನ್ನಲಾಗಿದೆ. ಡಾಲಿ ಅವರು ಸೂಪರ್ವೈಸರ್ ಆಗಿ ಬಂದ ಬಳಿಕವೇ ತನಗೆ ಕಿರುಕುಳ ಆರಂಭವಾಯಿತು ಎಂದು ನಾಗೇಶ್ವರಿ ಡೆತ್‌ನೋಟ್‌ನಲ್ಲಿ ಆರೋಪಿಸಿದ್ದಾರೆ ಎನ್ನಲಾಗಿದೆ.

ತನ್ನದಲ್ಲದ ತಪ್ಪುಗಳಿಗೆ ತನ್ನನ್ನೇ ಟಾರ್ಗೆಟ್ ಮಾಡಲಾಗುತ್ತಿತ್ತು. ಕೆಲಸದ ವಿಚಾರದಲ್ಲಿ ನಿರಂತರ ಒತ್ತಡ ಹೇರಲಾಗುತ್ತಿತ್ತು ಎಂದು ಅವರು ಡೆತ್‌ನೋಟ್‌ನಲ್ಲಿ ಉಲ್ಲೇಖಿಸಿದ್ದಾರೆ ಎನ್ನಲಾಗಿದೆ.

**ನಾಲ್ಕು ತಿಂಗಳಿಂದ ವೀಕ್‌ಆಫ್ ನೀಡಿಲ್ಲ ಎಂಬ ಆರೋಪ:** ಕಳೆದ ನಾಲ್ಕು ತಿಂಗಳಿನಿಂದ ತಮಗೆ ಒಂದು ದಿನವೂ ವೀಕ್‌ಆಫ್ ನೀಡಿಲ್ಲ ಎಂದು ನಾಗೇಶ್ವರಿ ಆರೋಪಿಸಿದ್ದಾರೆ. ತುರ್ತು ಪರಿಸ್ಥಿತಿಯಲ್ಲಿ ರಜೆ ಕೇಳಿದರೂ ರಜೆ ನೀಡುತ್ತಿರಲಿಲ್ಲ. ಕೆಲಸದ ಒತ್ತಡ ಹಾಗೂ ರಜೆ ನೀಡದಿರುವ ಬಗ್ಗೆ ಪ್ರಶ್ನಿಸಿದಾಗ, ತಮ್ಮನ್ನು ಕೆಲಸದಿಂದಲೇ ತೆಗೆದುಹಾಕಲಾಗಿದೆ ಎಂದು ಡೆತ್‌ನೋಟ್‌ನಲ್ಲಿ ತಿಳಿಸಿದ್ದಾರೆ ಎನ್ನಲಾಗಿದೆ.

ಕೆಲಸದಿಂದ ತೆಗೆದುಹಾಕಿದ ಬಳಿಕ ನೋಟಿಸ್ ಪಿರಿಯಡ್ ಕೂಡ ಮಾಡಿಸದೆ ತಮ್ಮನ್ನು ಹೊರಗಿಟ್ಟಿದ್ದಾರೆ ಎಂದು ಅವರು ಆರೋಪಿಸಿದ್ದಾರೆ. ಈ ಎಲ್ಲ ಬೆಳವಣಿಗೆಗಳಿಂದ ತೀವ್ರವಾಗಿ ಮನನೊಂದು ಆತ್ಮಹತ್ಯೆಯ ನಿರ್ಧಾರ ಕೈಗೊಂಡಿರುವುದಾಗಿ ಡೆತ್‌ನೋಟ್‌ನಲ್ಲಿ ಉಲ್ಲೇಖಿಸಿರುವುದಾಗಿ ತಿಳಿದುಬಂದಿದೆ.

**ಡೆತ್‌ನೋಟ್‌ನಲ್ಲಿ ನ್ಯಾಯಕ್ಕಾಗಿ ಮನವಿ:** ತಮ್ಮ ಸಾವಿಗೆ ಸೂಪರ್ವೈಸರ್ ಡಾಲಿ ಅವರಿಂದ ನೀಡಲಾದ ಕಿರುಕುಳವೇ ಕಾರಣ ಎಂದು ನಾಗೇಶ್ವರಿ ಆರೋಪಿಸಿರುವುದಾಗಿ ಕುಟುಂಬಸ್ಥರು ತಿಳಿಸಿದ್ದಾರೆ. ತನ್ನದಲ್ಲದ ತಪ್ಪಿಗೆ ಟಾರ್ಗೆಟ್ ಮಾಡಲಾಗುತ್ತಿತ್ತು ಹಾಗೂ ಕೆಲಸದ ವಿಚಾರದಲ್ಲಿ ಮಾನಸಿಕವಾಗಿ ಕಿರುಕುಳ ನೀಡಲಾಗುತ್ತಿತ್ತು ಎಂದು ಅವರು ಬರೆದಿಟ್ಟಿದ್ದಾರೆ ಎನ್ನಲಾಗಿದೆ.

ತಮ್ಮ ಸಾವಿಗೆ ನ್ಯಾಯ ದೊರಕಿಸಿಕೊಡಬೇಕು ಎಂದು ನಾಗೇಶ್ವರಿ ಡೆತ್‌ನೋಟ್‌ನಲ್ಲಿ ಮನವಿ ಮಾಡಿದ್ದಾರೆ ಎನ್ನಲಾಗಿದೆ. ಇದೀಗ ಅವರು ಬರೆದಿಟ್ಟಿದ್ದಾರೆ ಎನ್ನಲಾದ ಡೆತ್‌ನೋಟ್ ಪ್ರಕರಣದಲ್ಲಿ ಪ್ರಮುಖ ಸಾಕ್ಷ್ಯವಾಗಿದ್ದು, ಪೊಲೀಸರು ಅದರಲ್ಲಿರುವ ಅಂಶಗಳನ್ನೂ ಪರಿಶೀಲನೆ ನಡೆಸಬೇಕಿದೆ.

**ಕೆಲಸದ ಒತ್ತಡವೋ, ಕಿರುಕುಳವೋ?:** ನಾಗೇಶ್ವರಿ ಆತ್ಮಹತ್ಯೆಗೆ ನಿಖರ ಕಾರಣವೇನು ಎಂಬುದು ಇನ್ನಷ್ಟೇ ತನಿಖೆಯಿಂದ ತಿಳಿದುಬರಬೇಕಿದೆ. ಕೆಲಸದ ಒತ್ತಡದಿಂದ ಅವರು ಈ ನಿರ್ಧಾರ ಕೈಗೊಂಡರೇ ಅಥವಾ ಡೆತ್‌ನೋಟ್‌ನಲ್ಲಿ ಉಲ್ಲೇಖಿಸಿರುವಂತೆ ಸೂಪರ್ವೈಸರ್‌ನಿಂದ ನಿಜವಾಗಿಯೂ ಕಿರುಕುಳ ನಡೆದಿತ್ತೇ ಎಂಬುದು ತನಿಖೆಯ ಪ್ರಮುಖ ಅಂಶವಾಗಿದೆ.

ಡೆತ್‌ನೋಟ್‌ನಲ್ಲಿರುವ ಆರೋಪಗಳ ಸತ್ಯಾಸತ್ಯತೆಯನ್ನು ಪೊಲೀಸರು ಪರಿಶೀಲಿಸಬೇಕಿದೆ. ಸೂಪರ್ವೈಸರ್ ಡಾಲಿ ಅವರಿಂದ ನಾಗೇಶ್ವರಿಗೆ ನಿಜವಾಗಿಯೂ ಕಿರುಕುಳ ನೀಡಲಾಗಿತ್ತೇ, ಕೆಲಸದಿಂದ ತೆಗೆದುಹಾಕಿದ ಸಂದರ್ಭ ಏನಾಗಿತ್ತು, ರಜೆ ಹಾಗೂ ವೀಕ್‌ಆಫ್‌ಗೆ ಸಂಬಂಧಿಸಿದಂತೆ ಕಂಪನಿಯಲ್ಲಿ ಯಾವ ರೀತಿಯ ನಿಯಮಗಳಿದ್ದವು ಎಂಬುದರ ಬಗ್ಗೆಯೂ ತನಿಖೆ ನಡೆಯಬೇಕಿದೆ.